ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# 'ಗಲಭೆ ಪೂರ್ವನಿಯೋಜಿತ ಕೃತ್ಯ'

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಕಾಡುಗೊಂಡನಹಳ್ಳಿ (ಕೆ.ಜಿ.ಹಳ್ಳಿ) ಹಾಗೂ ದೇವರ ಜೀವನಹಳ್ಳಿ (ಡಿ.ಜೆ.ಹಳ್ಳಿ) ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದ ಗಲಭೆ ಪೂರ್ವನಿಯೋಜಿತ' ಎಂದು ನ್ಯಾಯಾಲಯಕ್ಕೆ ದೋಷರೋಪ ಪಟ್ಟಿ ಸಲ್ಲಿಸಿರುವ ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ಅಧಿಕಾರಿಗಳು, 'ತ್ರಿವಳಿ ತಲಾಖ್ ರದ್ದು, ರಾಮ ಜನ್ಮ ಭೂಮಿ ತೀರ್ಪು ಹಾಗೂ ಪೌರತ್ವ ಕಾಯ್ದೆಯಿಂದ ಆಕ್ರೋಶಗೊಂಡಿದ್ದ ಗುಂಪೊಂದು, ಗಲಭೆ ಸೃಷ್ಟಿಸಿತ್ತು' ಎಂದೂ ಹೇಳಿದ್ದಾರೆ.

'ದೇಶದಲ್ಲಿ ಅಶಾಂತಿ ಸೃಷ್ಟಿಸುವ ಉದ್ದೇಶವಿಟ್ಟುಕೊಂಡಿದ್ದ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (ಪಿಎಫ್‌ಐ) ಹಾಗೂ ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಕಾರ್ಯಕರ್ತರು, ಫೇಸ್‌ಬುಕ್ ಪೋಸ್ಟ್ ನೆಪ ಮಾಡಿಕೊಂಡು ಗಲಭೆ ಸೃಷ್ಟಿಸಿದ್ದರು' ಎಂದೂ ದೋಷಾರೋಪ ಪಟ್ಟಿಯಲ್ಲಿ ಉಲ್ಲೇಖಿಸಿರುವುದಾಗಿ ಗೊತ್ತಾಗಿದೆ.

'ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತರುವ ವಿವಾದಾತ್ಮಕ ಪೋಸ್ಟ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲು ಆರೋಪಿಗಳು ಸಂಚು ರೂಪಿಸಿದ್ದರು. ಕಳೆದ ವರ್ಷದ ಕೃಷ್ಣ ಜನ್ಮಾಷ್ಟಮಿಯಂದು ಆರೋಪಿಗಳೇ ವಿಡಿಯೊವೊಂದನ್ನು ಹರಿಬಿಟ್ಟಿದ್ದರು. ಅದನ್ನು ಕಾಂಗ್ರೆಸ್ ಶಾಸಕ ಅಖಂಡ ಶ್ರೀನಿವಾಸಮೂರ್ತಿ ಅವರ ಸಹೋದರ ಸಂಬಂಧಿ ನವೀನ್‌ಗೆ ಟ್ಯಾಗ್ ಮಾಡಿದ್ದರು. ವಿಡಿಯೊ ನೋಡಿದ್ದ ನವೀನ್, ಪ್ರಚೋದನೆಗೆ ಒಳಗಾಗಿ ಕಾಮೆಂಟ್ ಮಾಡಿದ್ದರು. ಅದನ್ನೇ ನೆಪ ಮಾಡಿಕೊಂಡು ಗಲಭೆ ಸೃಷ್ಟಿಸಲಾಯಿತು' ಎಂದೂ ಆರೋಪ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ.